**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/80/ಖಾಹುಮಾ/2014-15/ನೇ.ವಿ-2 (ಭಾಗ-2) ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 12.04.2018.

# ಸುತ್ತೋಲೆ

ವಿಷಯ: ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯುವ ಬಗ್ಗೆ.

ಉಲ್ಲೇಖ: (1) ಸರ್ಕಾರದ ಪತ್ರ ಸಂಖ್ಯೆ: ಇಡಿ/240/ಯುಪಿಸಿ/2014 ದಿ:01.09.2017.
(2) ಸರ್ಕಾರದ ಪತ್ರ ಸಂಖ್ಯೆ: ಇಡಿ/49/ಯುಪಿಸಿ/2018 ದಿ:10-04-2018.

** ** **

ಉಲ್ಲೇಖ (1)ರ ಸರ್ಕಾರದ ಪತ್ರದಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31-12-2015 ರವರೆಗೆ ವಿವಿಧ ಕಾರಣಗಳಿಂದ ತೆರವಾಗಿರುವ ಬೋಧಕರ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅನುಮತಿ ನೀಡಲಾಗಿದೆ.

ಆದರೆ, ರಾಜ್ಯದಲ್ಲಿ ಪ್ರಸ್ತುತ ಚುನಾವಣಾ ನೀತಿ ಸಂಹಿತೆ ಚಾಲ್ತಿಯಲ್ಲಿದ್ದು, ಅದರಂತೆ ಯಾವುದೇ ನೇಮಕಾತಿ ಆದೇಶವನ್ನು ಹೊರಡಿಸಲು ಅವಕಾಶವಿರುವುದಿಲ್ಲ. ಆದ್ದರಿಂದ ಉಲ್ಲೇಖ (2)ರ ಸರ್ಕಾರದ ಪತ್ರದ ನಿರ್ದೇಶನದಂತೆ ಚುನಾವಣಾ ನೀತಿ ಸಂಹಿತೆ ತೆರವುಗೊಳ್ಳುವವರೆಗೆ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಧಾರವಾಡ, ಶಿವಮೊಗ್ಗ & ಕಲಬುರಗಿ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ,
2. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಆಡಳಿತ ಮಂಡಳಿಗೆ-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ,
3. ಇಲಾಖಾ ವ್ಯಾಪ್ತಿಗೊಳಪಡುವ ಎಲ್ಲಾ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಸೂಚಿಸಲಾಗಿದೆ.
5. ಕಛೇರಿ ಪ್ರತಿ.